ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ

1090 ಶ್ರೀ ಶಂಕರಪಾಟೀಲ ಮುನೇನಕೊಪ್ಪ (ನವಲಗುಂದ) ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೋಧಿ, ಜೋಳ ಕಟಾವು ಮಾಡುವ ಯಂತ್ರಕ್ಕೆ (ಕೃಷಿ ಸಲಕರಣೆ) ಸಾರಿಗೆ ಇಲಾಖೆಯವರು ಪ್ರತಿ 3 ತಿಂಗಳಿಗೊಮ್ಮೆ ಕರ (ಟ್ಯಾಕ್ಸ್) ಆಕರಣೆ ಮಾಡುತ್ತಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬೇರೆ ರಾಜ್ಯಗಳಲ್ಲಿಲ್ಲದ ಈ ಕರ ಆಕರಣ ಪದ್ಧತಿ ಕರ್ನಾಟಕ ರಾಜ್ಯದಲ್ಲಿ ಮಾತ್ರ ಆಚರಣೆಯಲ್ಲಿರುವ ಕಾರಣವೇನು;

ಇ) ಈ ಪದ್ಧತಿಯನ್ನು ರದ್ದು ಮಾಡಲಾಗುವುದೇ?

ಶ್ರೀ ಆರ್. ಅಶೋಕ್ (ಸಾರಿಗೆ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ತೆರಿಗೆ ವಿಧಿಸುವುದು ಮತ್ತು ವಿನಾಯಿತಿ ನೀಡುವುದು ಆಯಾ ರಾಜ್ಯಕ್ಕೆ ಸಂಬಂಧಿಸಿರುತ್ತದೆ.

ಇ) ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

1190 ಶ್ರೀ ರಹೀಮ ಖಾನ್ ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿಯೇ ಬೀದರ್ ಜಿಲ್ಲೆಯು ಅತಿ ಹಿಂದುಳಿದ ಜಿಲ್ಲೆಯಾಗಿದ್ದು, ಇದರ ಸರ್ವಾಂಗೀಣ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮವೇನು;

ಆ) ಈ ಜಿಲ್ಲೆಯಲ್ಲಿ ಕೃಷಿ ವಿಶ್ವವಿದ್ಯಾಲಯವು ಇಲ್ಲದೇ ಈ ಭಾಗದ ವಿದ್ಯಾರ್ಥಿಗಳಿಗೆ ತುಂಬಾ ಅನಾನುಕೂಲವಾಗಿದ್ದು, ವಿದ್ಯಾಭ್ಯಾಸ ಮಾಡಲು ಬೇರೆ ಜಿಲ್ಲೆಗೆ ಹೋಗಬೇಕಾದ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹೊಸದಾಗಿ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಿ ಈ ಜಿಲ್ಲೆಯ ವಿದ್ಯಾರ್ಥಿಗಳಿಗೆ ಎಂದಿನಿಂದ ಅನುಕೂಲ ಕಲ್ಪಿಸಲಾಗುವುದು?

ಶ್ರೀ ಎಸ್.ಎ. ರವೀಂದ್ರನಾಥ್ (ಕೃಷಿ ಸಚಿವರು)

ಅ) ಬೀದರ್ ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ:

1) ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆ (S.G.S.Y.) ಇದಕ್ಕಾಗಿ ಲಭ್ಯವಿರುವ ಅನುದಾನದ ವಿವರಗಳನ್ನು ಇದರ ಕೆಳಗೆ ನೀಡಿದೆ:

ವರ್ಷ	ಅನುದಾನ (ಲಕ್ಷ ರೂ.ಗಳಲ್ಲಿ)		
	ಕೇಂದ್ರ	ರಾಜ್ಯ	ಒಟ್ಟು
2009–10	322.90	107.65	430.61

2) ಬೀದರ ಜಿಲ್ಲೆಯು ಅತ್ಯಂತ ಹಿಂದುಳಿದ ತಾಲ್ಲೂಕುಗಳೆಂದು ಗುರುತಿಸಲಾಗಿರುವ ಹುಮನಾಬಾದ್, ಭಾಲ್ಕಿ, ಔರಾದ್ ಮತ್ತು ಬಸವಕಲ್ಯಾಣ ತಾಲ್ಲೂಕುಗಳಲ್ಲಿನ 142 ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಸ್ವರಾಜ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಉದ್ದೇಶಕ್ಕಾಗಿ 2009–10ನೇ ಸಾಲಿಗೆ ಒಟ್ಟು 116.74 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದೆ.

3) ತಲಾ 16.00 ಲಕ್ಷ ರೂ.ಗಳ ನೆರವಿನಿಂದ ಜಿಲ್ಲೆಯ ಎಲ್ಲಾ ಐದು ತಾಲ್ಲೂಕು ಕೇಂದ್ರಗಳಲ್ಲಿ ಸಾಮರ್ಥ್ಯ ಸೌಧ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುತ್ತಿದೆ.

ಆ) ಬಂದಿದೆ.

ಇ) ರಾಯಚೂರು ಕೃಷಿ ವಿಶ್ವವಿದ್ಯಾಲಯವು ಬೀದರ್‌ಗೆ ಅತೀ ಸಮೀಪದಲ್ಲಿರುವುದರಿಂದ ಇನ್ನೊಂದು ಕೃಷಿ ವಿಶ್ವವಿದ್ಯಾಲಯವನ್ನು ಬೀದರ್‌ನಲ್ಲಿ ಸ್ಥಾಪಿಸುವ ಅವಶ್ಯಕತೆ ಕಂಡು ಬರುತ್ತಿಲ್ಲ.

1127 ಶ್ರೀ ರಘುಪತಿ ಭಟ್ ಕೆ. (ಉಡುಪಿ) ಮಾನ್ಯ ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಮಲ್ಪೆ ಬಂದರು ಮೂರನೇ ಹಂತದ (3rd stage) ಅಭಿವೃದ್ಧಿ ಕಾಮಗಾರಿಯ ಪ್ರಸ್ತಾವನೆ ಯಾವ ಹಂತದಲ್ಲಿದೆ;

ಆ) ಈ ಕಾಮಗಾರಿಗೆ ತಗಲಬಹುದಾದ ಅಂದಾಜು ವೆಚ್ಚ ಎಷ್ಟು;